# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1305
ಸದಸ್ಯರ ಹೆಸರು : ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ
ಉತ್ತರಿಸುವ ದಿನಾಂಕ : 19.03.2025
ಉತ್ತರಿಸುವ ಸಚಿವರು : ಕಂದಾಯ ಸಚಿವರು.

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಅಕ್ರಮ ಸಕ್ರಮಕ್ಕೆ ಸಲ್ಲಿಕೆಯಾಗಿರುವ ಹಲವಾರು ಅರ್ಹ ಅರ್ಜಿಗಳನ್ನು ಅಕಾರಣವಾಗಿ ಮತ್ತು ಅವೈಜ್ಞಾನಿಕವಾಗಿ ತಿರಸ್ಕರಿಸುವ ಪ್ರಕ್ರಿಯೆಯ ಕಾರಣದಿಂದಾಗಿ ತಲಾತಲಾಂತರದಿಂದ ಉಳುಮೆ ಮಾಡುತ್ತಾ ಆ ಭೂಮಿ ತಮಗೆ ಸಕ್ರಮಗೊಳ್ಳುವ ಆಶಾಭವನೆ ಹೊಂದಿದ್ದ ರೈತರಿಗೆ ತೀವ್ರ ಆಘಾತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಸರ್ಕಾರಿ ಜಮೀನುಗಳಲ್ಲಿ ಅನಧಿಕೃತವಾಗಿ ಮಾಡುತ್ತಿರುವ ಸಾಗುವಳಿಯನ್ನು ಸಕ್ರಮೀಕರಿಸಲು ಕರ್ನಾಟಕ ಭೂ ಕಂದಾಯ ಅಧಿನಿಯಮ, 1964ರ ಕಲಂ 94-ಎ, 94-ಬಿ, 94-ಎ(4)ರಡಿ ಕ್ರಮವಾಗಿ ನಮೂನೆ-50, 53 ಮತ್ತು 57ರಡಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.<br><br>ಕಾಯ್ದೆ ಮತ್ತು ನಿಯಮಗಳಲ್ಲಿರುವ ಅವಕಾಶದಂತೆ ಪರಿಶೀಲಿಸಿ ಅರ್ಹ ಅರ್ಜಿಗಳನ್ನು ಸಮಿತಿಯ ಮುಂದೆ ಮಂಡಿಸಲಾಗುತ್ತದೆ ಹಾಗೂ ಅನರ್ಹ ಅರ್ಜಿಗಳನ್ನು ತಿರಸ್ಕರಿಸಲು ಜಿಲ್ಲಾಧಿಕಾರಿಯವರಿಗೆ ಅವಕಾಶವಿದೆ.<br><br>ಕರ್ನಾಟಕ ಭೂ ಕಂದಾಯ ನಿಯಮಗಳು, 1966ರ ನಿಯಮ 108ಸಿ, 108ಸಿಸಿ ಹಾಗೂ 108ಸಿಸಿಸಿ ರಡಿ ಅನರ್ಹ ಅರ್ಜಿಗಳನ್ನು ಸಮಿತಿಯ ಮುಂದೆ ಮಂಡಿಸದೇ ತಿರಸ್ಕರಿಸಲು ಜಿಲ್ಲಾಧಿಕಾರಿಯವರಿಗೆ ಅವಕಾಶವಿರುತ್ತದೆ. ಅಲ್ಲದೇ ಅನರ್ಹ ಅರ್ಜಿಗಳನ್ನು ತಿರಸ್ಕರಿಸಲು ಸಮಿತಿಗೂ ಅಧಿಕಾರವಿರುತ್ತದೆ. |
| ಆ) | ಬಂದಿದ್ದಲ್ಲಿ, ಸದರಿ ಅರ್ಜಿಗಳ ವಿಲೇವಾರಿ ಸಲುವಾಗಿ ಸರ್ಕಾರ ರೂಪಿಸಿರುವ ನಿಯಮ, ಮಾನದಂಡ ಮತ್ತು ಮಾರ್ಗಸುಚಿಗಳೇನು: | ಸರ್ಕಾರದ ಸುತ್ತೋಲೆ ಸಂಖ್ಯೆ: ಆರ್.ಡಿ. 45 ಎಲ್.ಜಿ.ಪಿ. 2023, ದಿನಾಂಕ: 01.12.2023ರಲ್ಲಿ ಕರ್ನಾಟಕ ಭೂ ಕಂದಾಯ ಅಧಿನಿಯಮ 1964ರ ಕಲಂ 94-ಎ, 94-ಬಿ, 94-ಎ(4)ರಡಿ ಕಲ್ಪಿಸಿರುವ ಅವಕಾಶದಂತೆ ನಮೂನೆ-50, 53 ಮತ್ತು 57ರಡಿ ಸ್ವೀಕೃತವಾಗಿರುವ ಅರ್ಜಿಗಳನ್ನು ಶೀಘ್ರವಾಗಿ ಇತ್ಯರ್ಥಪಡಿಸುವ ಕುರಿತು ಮಾರ್ಗಸೂಚಿಗಳನ್ನು ಹೊರಡಿಸಲಾಗಿದ್ದು, **ಅನುಬಂಧ**ದಲ್ಲಿ ನೀಡಲಾಗಿದೆ. |
| ಇ) | ರಾಜ್ಯದಲ್ಲಿ ಬಗರ್‌ಹುಕುಂ ಸಾಗುವಳಿ ಭೂಮಿಯನ್ನು ಸಕ್ರಮಗೊಳಿಸುವಂತೆ ಕೋರಿ ಸಲ್ಲಿಕೆಯಾಗಿರುವ ಅರ್ಜಿಗಳ ಒಟ್ಟು ಸಂಖ್ಯೆ ಎಷ್ಟು: ಹಾಗೂ ಸದರಿ ಅರ್ಜಿಗಳ ವಿಲೇವಾರಿ ಪ್ರಕ್ರಿಯೆ ಪ್ರಸ್ತುತ ಯಾವ ಹಂತದಲ್ಲಿದೆ: | ರಾಜ್ಯದಲ್ಲಿ ಬಗರ್‌ಹುಕುಂ ಸಾಗುವಳಿ ಭೂಮಿಯನ್ನು ಸಕ್ರಮಗೊಳಿಸುವಂತೆ ಕೋರಿ ಸಲ್ಲಿಕೆಯಾಗಿರುವ ಅರ್ಜಿಗಳು ಈ ಕೆಳಕಂಡಂತಿದೆ.<br><br>ನಮೂನೆ 50: 1079556<br>ನಮೂನೆ 53: 1092734<br>ನಮೂನೆ 57: 1290468 |

| | | |
|---|---|---|
| | | ಬಾಕಿ ಇರುವ ಅರ್ಜಿಗಳನ್ನು ನಿಯಮಾನುಸಾರ ಪರಿಶೀಲಿಸಿ, ಅರ್ಹ ಅರ್ಜಿಗಳನ್ನು ಸಮಿತಿಯ ಮುಂದೆ ಮಂಡಿಸಲಾಗುತ್ತಿದೆ. |
| ಈ) | ರಾಜ್ಯದಲ್ಲಿನ ಎಲ್ಲಾ ಅರ್ಹ ಬಗರ್ ಹುಕುಂ ಸಾಗುವಳಿದಾರರ ಅರ್ಜಿ ಯಾವುದೇ ಕಾರಣಕ್ಕೂ ತಿರಸ್ಕಾರಗೊಳ್ಳದೆ ಅವರಿಗೆ ನ್ಯಾಯ ದೊರಕಿಸಿಕೊಡಲು ಸರ್ಕಾರ ಕೂಡಲೇ ಅಗತ್ಯ ಕ್ರಮ ವಹಿಸುವುದೇ? | ರಾಜ್ಯದಲ್ಲಿನ ಎಲ್ಲಾ ಅರ್ಹ ಬಗರ್‌ಹುಕುಂ ಸಾಗುವಳಿದಾರರ ಅರ್ಜಿಗಳನ್ನು ನಿಯಮಾನುಸಾರ ಪರಿಶೀಲಿಸಿ ಸಮಿತಿಯ ಮುಂದೆ ಮಂಡಿಸಲು ಕ್ರಮವಹಿಸಲಾಗುತ್ತಿದೆ. |

ಸಂಖ್ಯೆ: ಆರ್‌ಡಿ 58 ಎಲ್‌ಜಿಕ್ಯೂ 2025

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು